ಬೆಂಗಳೂರು
ನಗರ ವಿಶ್ವವಿದ್ಯಾನಿಲಯ
ಆಗು ನೀ ಅನಿಕೇತನ
BE BOUNDLESS
BENGALURU
CITY UNIVERSITY
Office of the Registrar, Central College Campus, Dr. B.R AmbedkarVeedhi,
Bengaluru – 560 001.Ph.No.080-22131385, E-mail: registrarbcu@gmail.com

ಸಂಖ್ಯೆ: ಬೆಂ.ನ.ವಿ/ಕುಸಆ/316/2021–22

ದಿನಾಂಕ: 27.12.2021
28

## ಸುತ್ತೋಲೆ

ರೈತರ ಮಕ್ಕಳ ಹೆಚ್ಚಿನ ಹಾಗು ಉನ್ನತ ಶಿಕ್ಷಣವನ್ನು ಪ್ರೋತ್ಸಾಹಿಸಲು ಹೊಸ ಶಿಷ್ಯ ವೇತನ ಯೋಜನೆಯಾದ **"ಮುಖ್ಯಮಂತ್ರಿ ರೈತ ವಿದ್ಯಾ ನಿಧಿ"** ಯೋಜನೆಯನ್ನು ರಾಜ್ಯದಲ್ಲಿ 2021–22ನೇ ಸಾಲಿನಂದ ಜಾರಿಗೊಳಿಸುವ ಕುರಿತು ಸರ್ಕಾರದ ಆದೇಶ ಸಂಖ್ಯೆ AGRI-AML/141/2021 ದಿನಾಂಕ 7/08/2021 ರಲ್ಲಿ ಹೊರಡಿಸಿರುವ ಸರ್ಕಾರಿ ಆದೇಶದ ಭಾಗದಲ್ಲಿನ ಷರತ್ತುಗಳನ್ನು ಮಾರ್ಪಾಡಿಸಿ ದಿನಾಂಕ 10/12/2021 ರಂದು ಮಾರ್ಪಾಡು ಆದೇಶವನ್ನು ಹೊರಡಿಸಿ ಈ ಕೆಳಕಂಡಂತೆ ಮಾರ್ಪಾಡಿಸಲಾಗಿದೆ.

| ಕ್ರ ಸಂ | ಷರತ್ತುಗಳು | ಮಾರ್ಪಾಡಿತ ಷರತ್ತುಗಳು |
|---|---|---|
| 1) | ರೈತರ ಮಕ್ಕಳು, ಕರ್ನಾಟಕ ರಾಜ್ಯದ ಅನುದಾನದಿಂದ ಪಾವತಿಸುವಂತಹ ಒಂದು ವಿದ್ಯಾರ್ಥಿ ವೇತನಕ್ಕೆ ಮಾತ್ರ ಅರ್ಹರಿರುತ್ತಾರೆ. ಆದರೆ, ಮೆರಿಟ್. ಅರ್ಹತಾ ಪರೀಕ್ಸೆ, ಶೈಕ್ಷಣಿಕ ಪರೀಕ್ಷೆಗಳಲ್ಲಿ ರಾಂಕ್ ಇತ್ಯಾದಿಗಳ ಆಧಾರದ ಮೇಲೆ ಶಿಷ್ಯ ವೇತನ/ ಪ್ರಶಸ್ತಿ/ ಪ್ರತಿಫಲ ಇವುಗಳನ್ನು ರೈತ ಮಕ್ಕಳು ಪಡೆದಿದ್ದರು ಈ ಶಿಷ್ಯವೇತನವನ್ನು ಪಡೆಯಲು ಅರ್ಹರಿರುತ್ತಾರೆ. | ರೈತ ಕುಟುಂಬದ ಎಲ್ಲಾ ಮಕ್ಕಳು **'ಮುಖ್ಯಮಂತ್ರಿ ರೈತ ವಿದ್ಯಾನಿಧಿ'** ವಿದ್ಯಾರ್ಥಿವೇತನ ಪಡೆಯಲು ಅರ್ಹರಿರುತ್ತಾರೆ. ಸದರಿ ಉದ್ದೇಶಕ್ಕೆ ರೈತ ಕುಟುಂಬ ಎಂದರೆ ರಾಜ್ಯದ ಇ–ಆಡಳಿತ ಇಲಾಖೆಯು ನಿರ್ವಹಿಸುತ್ತಿರುವ "ಕುಟುಂಬ" ತಂತ್ರಾಂಶದ ದತ್ತಾಂಶದಲ್ಲಿ ದಾಖಲಾಗಿರುವ ಸದಸ್ಯರು. |
| 2) | ರೈತ ಮಕ್ಕಳ ತಂದೆ–ತಾಯಿ ಇಬ್ಬರು ಕೃಷಿ ಜಮೀನಿನ ಒಡೆಯರಾಗಿದ್ದರೆ, ಈ ಯೋಜನೆಯಲ್ಲಿ ಒಂದು ಶಿಷ್ಯವೇತನಕ್ಕೆ ಮಾತ್ರ ರೈತರ ಮಕ್ಕಳು ಅರ್ಹರಾಗಿರುತ್ತಾರೆ. | ವಿದ್ಯಾರ್ಥಿಯು ಇತರೆ ಯಾವುದೇ ವಿದ್ಯಾರ್ಥಿ ವೇತನ ಪಡೆಯುತ್ತಿದ್ದರು **'ಮುಖ್ಯಮಂತ್ರಿ ರೈತ ವಿದ್ಯಾನಿಧಿ'** ವಿದ್ಯಾರ್ಥಿವೇತನ ಪಡೆಯಲು ಅರ್ಹರಾಗುತ್ತಾರೆ. |
| 3) | ಈ ಶಿಷ್ಯವೇತನವು ಶಿಕ್ಷಣದ ಯಾವುದೇ ಕೋರ್ಸಿನ ಸೆಮಿಸ್ಟರ್/ ಶೈಕ್ಷಣಿಕ ವರ್ಷಗಳಿಗೆ ಮಿತಿಯಾಗಿರತಕ್ಕದ್ದು. ಕೋರ್ಸ್ ಸೆಮಿಸ್ಟರ್ ನಲ್ಲಿ/ ಶೈಕ್ಷಣಿಕ ವರ್ಷದಲ್ಲಿ ಅನುತ್ತೀರ್ಣ ಹೊಂದಿ ಪುನ: ಆ ಸೆಮಿಸ್ಟರ್/ ಶೈಕ್ಷಣಿಕ ವರ್ಷದಲ್ಲಿ ವಿದ್ಯಾಭ್ಯಾಸದ ಪುನರಾವರ್ತನೆಯಾದರೆ (ಪುನ: ಪರೀಕ್ಷೆ ತೆಗೆದುಕೊಂಡರೆ) ವಿದ್ಯಾರ್ಥಿಗಳು ಶಿಷ್ಯ ವೇತನವನ್ನು ಪಡೆಯಲು ಅರ್ಹರಾಗಿರುವುದಿಲ್ಲ | **'ಮುಖ್ಯಮಂತ್ರಿ ರೈತ ವಿದ್ಯಾನಿಧಿ'** ವಿದ್ಯಾರ್ಥಿವೇತನವನ್ನು ವಿತರಿಸುವ ಉದ್ದೇಶಕ್ಕೆ ರಾಜ್ಯದ ವಿವಿಧ ಇಲಾಖೆಗಳು ನಿರ್ವಹಿಸುತ್ತಿರುವ ಶೈಕ್ಷಣಿಕ ಹಾಗೂ ಇತರೆ ದತ್ತಾಂಶದ ಆಧಾರದ ಮೇಲೆ ಫಲಾನುಭವಿಗಳನ್ನು ಗುರುತಿಸಿ (On entitlement basis) ವಿದ್ಯಾರ್ಥಿ |

| | | |
|---|---|---|
| | | ವೇತನವನ್ನು ವಿತರಿಸುವುದು ಹಾಗೂ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಿದಲ್ಲಿ, ಅಂತಹ ಪ್ರಕರಣಗಳನ್ನು ಸಹ ಪರಿಗಣಿಸಿ ಅರ್ಹರಿಗೆ ವಿದ್ಯಾರ್ಥಿ ವೇತನವನ್ನು ನೇರ ನಗದು ವರ್ಗಾವಣೆ (Direct Benefit Transfer) ಮೂಲಕ ವರ್ಗಾಯಿಸುವುದು |
| 4) | ಈ ಶಿಷ್ಯವೇತನವನ್ನು ಯಾವುದಾದರು ಒಂದು ವಿಧದ ಕೋರ್ಸಗೆ ನೀಡಲಾಗುವುದು. ಉದಾರಣೆಗೆ (X) ಎಂಬ ಸ್ನಾತಕೋತ್ತರ ಪದವಿಯನ್ನು ಪೂರೈಸಿದ ನಂತರ (Y) ಎಂಬ ಸ್ನಾತಕೋತ್ತರ ಕೋರ್ಸಗೆ ವಿದ್ಯಾರ್ಥಿಯು ಪ್ರವೇಶ ಪಡೆದಲ್ಲಿ ಈ ಕೋರ್ಸಗೆ ಶಿಷ್ಯವೇತನವನ್ನು ಪಡೆಯಲು ಅರ್ಹವಾಗುವುದಿಲ್ಲ | ಯಾವುದೇ ಮಾರ್ಪಾಡು ಇರುವುದಿಲ್ಲ |

ಇದರ ಬಗ್ಗೆ ವಿಶ್ವವಿದ್ಯಾಲಯದಲ್ಲಿನ ವಿದ್ಯಾರ್ಥಿಗಳಿಗೆ ಹಾಗು ಸಂಯೋಜಿತ ಕಾಲೇಜಿನ ವಿದ್ಯಾರ್ಥಿಗಳಿಗೆ ಅರಿವು ಮೂಡಿಸಲು ವ್ಯಾಪಕ ಪ್ರಚಾರ ನೀಡಿ ಅಯಾ ವಿ.ವಿ ಹಾಗು ಕಾಲೇಜುಗಳ Website ನಲ್ಲಿ ಅಳವಡಿಸುವಂತೆ ಸೂಚಿಸಿ SSP ನಿಂದ e-mail ಸಂದೇಶ ಬಂದಿದ್ದು, ಇದರ ಬಗ್ಗೆ ತಮ್ಮ ವಿಭಾಗಗಳಲ್ಲಿ/ ಕಾಲೇಜ್ ಗಳಲ್ಲಿ ವಿದ್ಯಾರ್ಥಿಗಳಿಗೆ ಅನುಕೂಲವಾಗುವಂತೆ, ಈ ಸುತ್ತೋಲೆಯನ್ನು ಹೊರಡಿಸಲಾಗಿದೆ.

ಕುಲಸಚಿವರು (ಆಡಳಿತ)

28/12

ಗೆ,

1) ಬೆಂ.ನ.ವಿ.ವಿ ಸೆಂಟ್ರಲ್ ಕಾಲೇಜಿನ ಎಲ್ಲಾ ಸ್ನಾತಕೋತ್ತರ ವಿಭಾಗದ ಮುಖ್ಯಸ್ಥರಿಗೆ
2) ಪ್ರಾಂಶುಪಾಲರು, ಎಲ್ಲಾ ಸಂಯೋಜಿತ ಕಾಲೇಜು, ಬೆಂ.ನ.ವಿ.ವಿ

ಪ್ರತಿಗಳು:

1) ಕುಲಪತಿಗಳ ಆಪ್ತಶಾಖೆ, ಬೆಂ.ನ.ವಿ.ವಿ
2) ಕುಲಸಚಿವರು (ಮೌ), ಬೆಂ.ನ.ವಿ.ವಿ
3) ಕಛೇರಿ ಪ್ರತಿ